(17)

**ಕರ್ನಾಟಕ ಸರ್ಕಾರ**

**ಸಂಖ್ಯೆ:ಸಿಆಸುಇ:110:ಆರ್.ಟಿ.ಐ.:2015**

**ಕರ್ನಾಟಕ ಸರ್ಕಾರದ ಸಚಿವಾಲಯ,**
**ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಜನಸ್ಪಂದನ)**
**3ನೇ ಮಹಡಿ, ಪೋಡಿಯಂ ಬ್ಲಾಕ್,**
**ವಿಶ್ವೇಶ್ವರಯ್ಯ ಮುಖ್ಯ ಗೋಪುರ,**
**ಬೆಂಗಳೂರು, ದಿನಾಂಕ: 05.08.2015.**

# ಸುತ್ತೋಲೆ

ವಿಷಯ: ಮಾಹಿತಿ ಹಕ್ಕು ಅಧಿನಿಯಮ, 2005ರ ಪ್ರಕರಣ (5) ರನ್ವಯ ಸಾರ್ವಜನಿಕ ಮಾಹಿತಿ ಅಧಿಕಾರಿಗಳ ನಿಯುಕ್ತಿ ಕುರಿತು

---0---

ಮಾಹಿತಿ ಹಕ್ಕು ಅಧಿನಿಯಮ, 2005ರ ಪ್ರಕರಣ (5) ರನ್ವಯ ಪ್ರತಿಯೊಂದು ಸಾರ್ವಜನಿಕ ಪ್ರಾಧಿಕಾರವು ಮಾಹಿತಿಗಾಗಿ ಕೋರಿಕೆ ಸಲ್ಲಿಸುವ ವ್ಯಕ್ತಿಗಳಿಗೆ ಮಾಹಿತಿ ಒದಗಿಸಲು ಅದರ ಅಧೀನದಲ್ಲಿರುವ ಎಲ್ಲ ಆಡಳಿತ ಘಟಕಗಳು ಅಥವಾ ಕಛೇರಿಗಳಲ್ಲಿ ಅವಶ್ಯವಾಗಬಹುದಾದಷ್ಟು ಸಂಖ್ಯೆಯ ಅಧಿಕಾರಿಗಳನ್ನು ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಗಳನ್ನಾಗಿ ನಿಯುಕ್ತಿಗೊಳಿಸತಕ್ಕದ್ದು.

ಕರ್ನಾಟಕ ಮಾಹಿತಿ ಆಯೋಗದ 2013-14ನೇ ಸಾಲಿನ ಶಿಫಾರಸ್ಸಿನನ್ವಯ ಮಾಹಿತಿ ಹಕ್ಕು ಅಧಿನಿಯಮ, 2005ರ ಕಲಂ (5)ರ ಮೇರೆಗೆ ಸಾರ್ವಜನಿಕ ಪ್ರಾಧಿಕಾರವು ನಿಯುಕ್ತಿಗೊಳಿಸುವ ಸಾರ್ವಜನಿಕ ಮಾಹಿತಿ ಅಧಿಕಾರಿಯು ಪತ್ರಾಂಕಿತ ಅಧಿಕಾರಿಯ ವೃಂದಕ್ಕಿಂತ ಕಡಿಮೆ ವೃಂದದವರಾಗಿರತಕ್ಕದ್ದಲ್ಲ. ಪತ್ರಾಂಕಿತ ಅಧಿಕಾರಿಯು ಲಭ್ಯವಿಲ್ಲದ ಪಕ್ಷದಲ್ಲಿ, ಕಚೇರಿ ಮುಖ್ಯಸ್ಥರಿಗಿಂತಲೂ ಕೆಳಗಿನ ವೃಂದದವರಾಗಿರತಕ್ಕದ್ದಲ್ಲ. ಆದ್ದರಿಂದ ಆಯೋಗದ ಶಿಫಾರಸ್ಸಿನನ್ವಯ ಸಾರ್ವಜನಿಕ ಮಾಹಿತಿ ಅಧಿಕಾರಿಗಳನ್ನು ನಿಯುಕ್ತಿಗೊಳಿಸಲು ತಮ್ಮ ಆಡಳಿತದ ಅಧೀನದಲ್ಲಿ ಬರುವ ಎಲ್ಲ ಸಾರ್ವಜನಿಕ ಪ್ರಾಧಿಕಾರಗಳಿಗೆ ಸೂಚಿಸುವುದು.

**(ಪರಮೇಶ್ ಪಾಂಡೆ)**
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಜನಸ್ಪಂದನ)

**Despatched on** 5/8/15

**ಇವರಿಗೆ,**

ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು

**ಪ್ರತಿ:**

1. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಎಲ್ಲ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
3. ಮುಖ್ಯ ಮಾಹಿತಿ ಆಯುಕ್ತರ ಆಪ್ತ ಸಹಾಯಕರು, ಕರ್ನಾಟಕ ಮಾಹಿತಿ ಆಯೋಗ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಿಆಸುಇ(ಜನಸ್ಪಂದನ), ವಿ.ವಿ.ಗೋಪುರ.
5. ಕಾರ್ಯದರ್ಶಿಗಳು, ಕರ್ನಾಟಕ ಮಾಹಿತಿ ಆಯೋಗ, ಬಹುಮಹಡಿಗಳ ಕಟ್ಟಡ, ಬೆಂಗಳೂರು.

Office work\Right to information-2014\circulars